**ಎರಡನೇ ಅಪರ ಸಿವಿಲ್ ನ್ಯಾಯಾಲಯ ಮತ್ತು**
**ಜೆ.ಎಂ.ಎಫ್.ಸಿ. ಕನಕಪುರ.**

CC No.790/2021

CW -2 PW -2

| | | |
|---|---|---|
| ಹೆಸರು | ಃ | ನಂದೀಶ್ |
| ತಂದೆಯ ಹೆಸರು | ಃ | ನಾಗಯ್ಯ |
| ವಯಸ್ಸು | ಃ | 30 ವರ್ಷ |
| ಉದ್ಯೋಗ | ಃ | ಗಾರೆ ಕೆಲಸ |
| ವಾಸ | ಃ | ಕಲ್ಲಹಳ್ಳಿ |

ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಃ ಮಾನ್ಯ ಎಪಿಪಿ ಯವರಿಂದ ಃ ದಿನಾಂಕ 06.08.2024

ನ್ಯಾಯಾಲಯ ಮುಂದಿರುವ ಆರೋಪಿತ ಗೊತ್ತು. ಚಾಸಾ-1, 3 ರಿಂದ 9 ಗೊತ್ತು.

ನಿಪಿ-1 ರಲ್ಲಿರುವ ಸಾಕ್ಷಿಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಬಿ ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-1 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿಲ್ಲ.

ಚಾಸಾ-1 ರವರು ನನ್ನನ್ನು ಮತ್ತು ಚಾಸಾ-2 ರವರನ್ನು ಅವರ ಕೊಠಡಿಗೆ ಬರಮಾಡಿಕೊಂಡು ವರಗೇರಹಳ್ಳಿ ಗ್ರಾಮದ ಆರೋಪಿಯು ತನ್ನ ಅಂಗಡಿಯ ಮುಂಭಾಗದಲ್ಲಿ ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುತ್ತಿರುವ ಬಗ್ಗೆ ಬಾತ್ಮೀ ಬಂದಿರುತ್ತದೆ. ನೀವು ಪಂಚರಾಗಿ

ಸಹಕರಿಸಬೇಕೆಂದು ಹೇಳಿರುವುದಿಲ್ಲ.

ನಂತರ ಸ್ಥಳಕ್ಕೆ ನಮ್ಮನ್ನು ಕರೆದುಕೊಂಡು ಹೋಗಿ ನಮ್ಮ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ ಮದ್ಯವನ್ನು ಅಮಾನತ್ತು ಪಡಿಸಿಕೊಂಡು ನನ್ನ ಸಹಿಯನ್ನು ಪಡೆದಿರುವುದಿಲ್ಲ. ಈ ಸಂಬಂಧ ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಅನುಮತಿಸಲಾಯಿತು).

<u>ಪಾಟೀ ಸವಾಲು ಃ ಎಪಿಪಿ ಯವರಿಂದ ಃ</u>

ದಿನಾಂಕಃ 09.06.2021 ರಂದು ನಾನು ಮತ್ತು ಚಾಸ-3 ರವರು ಕೆಲಸ ದ ನಿಮಿತ್ತ

ಸಂಜೆ 5.20 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-2 ರವರು ನಮ್ಮ ಗ್ರಾಮದಲ್ಲಿರುವಾಗ ಚಾಸಾ-4 ರವರು ನನಗೆ ಪೋನ್ ಮಾಡಿ ಪೋಲಿಸ್ ಠಾಣೆಯ ಬಳಿ ಬರುವಂತೆ ತಿಳಿಸಿದರು ಎಂದರೆ ಸರಿಯಲ್ಲ.

ಅದರಂತೆ ನಾನು ಮತ್ತು ಚಾಸಾ-2 ರವರು ಕನಕಪುರ ಗ್ರಾಮಾಂತರ ಪೋಲಿಸ್ ಠಾಣೆಗೆ ಬಂದಿದ್ದಾಗ ಚಾಸಾ-1 ರವರು ಸಂಜೆ 5.40 ಗಂಟೆ ಸಮಯದಲ್ಲಿ ನನ್ನನ್ನು ಮತ್ತು ಚಾಸಾ-2 ರವರನ್ನು ಮತ್ತು ಠಾಣಾ ಸಿಬ್ಬಂದಿಗಳನ್ನು ಅವರ ಕೊಠಡಿಗೆ ಬರಮಾಡಿಕೊಂಡು ವರಗೆರಹಳ್ಳಿ ಗ್ರಾಮದ ಆರೋಪಿಯ ತನ್ನ ಅಂಗಡಿಯ ಮುಂಭಾಗದಲ್ಲಿ ಬೆಂಚಿನ ಕೆಳಭಾಗದಲ್ಲಿ ಅಕ್ರಮವಾಗಿ ಮದ್ಯವನ್ನು

ಮಾರಾಟ ಮಾಡುತ್ತಿರುವುದಾಗಿ ಮಾಹಿತಿ ಬಂದಿರುತ್ತದೆ ಸ್ಥಳಕ್ಕೆ ಹೋಗಿ ಧಾಳಿ ಕಾಲದಲ್ಲಿ ನೀವುಗಳು ಪಂಚರಾಗಿ ತನಿಖೆಗೆ ಸಹಕರಿಸಲು ಕೋರಿದ್ದರ ಮೇರೆಗೆ ನಾವುಗಳು ಒಪ್ಪಿರುತ್ತೇವೆ ಎಂದರೆ ಸರಿಯಲ್ಲ.

ಚಾಸಾ-1 ರವರು ನಮ್ಮಗಳನ್ನು ಮತ್ತು ಠಾಣಾ ಸಿಬ್ಬಂದಿಗಳನ್ನು ಸರ್ಕಾರಿ ಜೀಪ್ ನಲ್ಲಿ ಮೇಲ್ಕಂಡ ಸ್ಥಳಕ್ಕೆ ಕರೆದುಕೊಂಡು ಹೋಗಿ ಆರೋಪಿಯ ಮನೆಯ ಬಳಿ ಜೀಪನ್ನು ನಿಲ್ಲಿಸಿ ಮರೆಯಲ್ಲಿ ನಿಂತು ನೋಡಲಾಗಿ ಅಂಗಡಿಯ ಮುಂಭಾಗದಲ್ಲಿರುವ ಬೆಂಚಿನ ಕೆಳಭಾಗದಲ್ಲಿ ಬಿಳಿಯ ಪ್ಲಾಸ್ಟಿಕ್ ಚೀಲದಲ್ಲಿ ಮದ್ಯವನ್ನು ಮಾರಾಟ ಮಾಡುತ್ತಿರುವುದನ್ನು ಖಚಿತ ಪಡಿಸಿಕೊಂಡು, ನಾವುಗಳೆಲ್ಲ ಅಂಗಡಿಯ ಬಳಿ ಹೋಗಿ ವ್ಯಕ್ತಿ ಸಮವಸ್ತ್ರದಲ್ಲಿ ಪೋಲಿಸರನ್ನು ನೋಡಿ ಓಡಿ ಹೋಗಿರುತ್ತಾನೆ ಎಂದರೆ ಸರಿಯಲ್ಲ.

ಅಂಗಡಿಯ ಮುಂಭಾಗದಲ್ಲಿದ್ದ ಬೆಂಚಿನ ಕೆಳಭಾಗದಲ್ಲಿದ್ದ ಚೀಲವನ್ನು ಪೋಲಿಸರು ನಮ್ಮ ಸಮಕ್ಷಮ ಪರಿಶೀಲಿಸಿ ನೋಡಲಾಗಿ ಅದರಲ್ಲಿ Old Tavarin Whisky 180 ml 13 Sachet ಗಳು , ಹೈವಾಡ್ಸ್ ಚಿಯರ್ಸ್ ವಿಸ್ಕಿ 90 ಎಂ ಎಲ್ ನ 26 ಸ್ಯಾಚೆಟ್ ಗಳು ಒಟ್ಟು 2 ಲೀ. 340 ಎಂ ಎಲ್ , ಇವುಗಳ ಪೈಕಿ ತಲಾ ಒಂದೊಂದನ್ನು ಮಾದರಿ ತೆಗೆದು ಬಿಳಿ ಬಣ್ಣದ ಚೀಲದಲ್ಲಿ ಹಾಕಿ ಬಾಯಿ ಕಟ್ಟಿ ಎಸ್ ಎಂಬ ಅಕ್ಷರದಿಂದ ಸೀಲು ಹಾಕಿ ಪಂಚಾಯಿತಿದಾರರಾದ ನಮ್ಮ ಸಹಿ ಇರುವ ಚೀಟಿಯನ್ನು ಅಂಟಿಸಿ ಉಳಿದ ಮದ್ಯವನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ.

ಓಡಿ ಹೋದ ವ್ಯಕ್ತಿಯ ಬಗ್ಗೆ ವಿಚಾರ ಮಾಡಲಾಗಿ ಕುಮಾರ್ ವರಗೇರಹಳ್ಳಿ ಗ್ರಾಮದ ನಿವಾಸಿ ಎಯಿ ತಿಳಿದು ಬಂದಿರುತ್ತದೆ ಎಂದರೆ

ಸರಿಯಲ್ಲ. ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಸಾಕ್ಷಿ ನಿರಾಕರಿಸಿದ ಹೇಳಿಕೆ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಯ ಜೊತೆ ರಾಜಿ ಮಾಡಿಕೊಂಡು ಆರೋಪಿಗೆ ಸಹಾಯ ಮಾಡಲು ಅವರ ಹೇಳಿಕೆ ಮೇರೆಗೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು : ಇಲ್ಲ.</u>

<u>ಮರುವಿಚಾರಣೆ : ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಕನಕಪುರ**

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಅನುಮತಿಸಲಾಯಿತು).

<u>ಪಾಟೀ ಸವಾಲು : ಎಪಿಪಿ ಯವರಿಂದ :</u>

ದಿನಾಂಕ: 27.11.2009 ರಂದು ಸಂಜೆ 4.50 ಗಂಟೆ ಸಮಯದಲ್ಲಿ ಚಾಸಾ-1 ರವರು ನಮ್ಮೂರಿನ ಬಳಿ ರಸ್ತೆಯ ಪಕ್ಕ ನಿಂತು

ಮಾತನಾಡುತ್ತಿದ್ದಾಗ ಚಾಸಾ-6 ರವರು ನಮಗೆ ತಿಳಿಸಿದ್ದೇನೆಂದರೆ ನಾನು ಸುಮಾರು 4.45 ಗಂಟೆಯಲ್ಲಿ ಠಾಣೆಯಲ್ಲಿದ್ದಾಗ ದೂರವಾಣಿ ಮುಖಾಂತರ ಒಬ್ಬ ಅನಾಮಧೇಯ ಕರೆ ಮಾಡಿ ಆರೋಪಿಯು ತಮ್ಮ ಅಂಗಡಿಯಲ್ಲಿ ಯಾವುದೇ ಪರವಾನಿಗಿ ಇಲ್ಲದೆ ಅಕ್ರಮವಾಗಿ ಮದ್ಯವನ್ನು ಇಟ್ಟುಕೊಂಡು ಮಾರಾಟ ಮಾಡುತ್ತಿದ್ದಾನೆಂದು ಬಂದ ಖಚಿತವಾದ ಮಾಹಿತಿ ಮೇರೆಗೆ ನಾನು ಮತ್ತು ಸಿಬ್ಬಂದಿ ದಾಳಿ ಮಾಡಲು ಬಂದಿದ್ದೇವೆ ನೀವು ಪಂಚರಾಗಿ ಬರಬೇಕೆಂದು ಕೋರಿಕೊಂಡಿದ್ದ ಮೇರೆಗೆ ನಾವು ಒಪ್ಪಿ ಪಂಚರಾದೆವು ಎಂದರೆ ಸರಿಯಲ್ಲ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ದೂರು ನೀಡಿಲ್ಲ.

ದಿನಾಂಕ 20.12.2014 ರಂದು ಕನಕಪುರ ಗ್ರಾಮಾಂತರ ಪೋಲಿಸರು ನನ್ನ ಸಮಕ್ಷಮ ಸ್ಥಳ ಪರಿಶೀಲನೆ ಮಾಡಿ ಮಹಜರ್ ಕ್ರಮ ಜರುಗಿಸಿ ಕೃತ್ಯ ಸ್ಥಳದಿಂದ ಕಲ್ಲನ್ನು ಅಮಾನತ್ತು ಪಡಿಸಿಕೊಂಡು ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಸಾಕ್ಷಿ ನಿರಾಕರಿಸಿದ ಹೇಳಿಕೆ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಯ ಜೊತೆ ರಾಜಿ ಮಾಡಿಕೊಂಡು ಆರೋಪಿಗೆ ಸಹಾಯ ಮಾಡಲು ಅವರ ಹೇಳಿಕೆ ಮೇರೆಗೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು : ಇಲ್ಲ.

ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ, ಕನಕಪುರ**